## ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ, ಕನಕಪುರ

## ಸಿ.ಸಿ ನಂಃ 102/2019

| **ಚಾಸಾ ಃ** | **1** | **ಪ್ರಾಸಾಃ-** | **2** |
|---|---|---|---|

| | |
|---|---|
| ಹೆಸರು | ಮಜ್ ಅಹಮ್ಮದ್ |
| ತಂದೆಯ ಹೆಸರು | ಮಗ್ಬುಲ್ ಅಹಮ್ಮದ್ |
| ವಯಸ್ಸು | 37 |
| ಉದ್ಯೋಗ | ಖಾಸಗಿ ಕೆಲಸ |
| ವಿಳಾಸ | ಕನಕಪುರ |

- - - - - - - - - - - - - - - - - - - - - - - - - - - - - -

**ದಿಃ19.03.2024ರಂದು ಸಾಕ್ಷಿಗೆ ಪ್ರಮಾಣ ವಚನ ಬೋದಿಸಲಾಯಿತು.**

**<u>ಮುಖ್ಯವಿಚಾರಣೆ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-</u>**

ಆರೋಪಿತರ ಪರಿಚಯವಿಲ್ಲ. ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ.

ಆರೋಪಿತರ ಮತ್ತು ನನ್ನ ನಡುವೆ ಯಾವುದೇ ಗಲಾಟೆಯಾಗಿರುವುದಿಲ್ಲ. ಆರೋಪಿತರು ನಮಗೆ ಗಂಪು ಕಟ್ಟಿಕೊಂಡು ಬಂದು ಅತಿಕ್ರಮ ಪ್ರವೇಶ ಮಾಡಿ, ಯಾವುದೇ ಹಲ್ಲೆ ಮಾಡಿಲ್ಲ ಮತ್ತು ಪ್ರಾಣ ಬೆದರಿಕೆ ಹಾಕಿಲ್ಲ.

ನಾನು ಆರೋಪಿತರ ವಿರುದ್ದ ಯಾವುದೇ ದೂರನ್ನು ನೀಡಿಲ್ಲ. ನನಗೆ ಈಗ ತೋರಿಸಿದ ದಾಖಲೆಯಲ್ಲಿ ನನ್ನ ಸಹಿ ಇರುತ್ತದೆ. ಆ ದಾಖಲೆಯು ದೂರಾಗಿದ್ದು, ಅದನ್ನು ನಿಪಿ-4 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು.

ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಜರುಗಿಸಿಲ್ಲ. ನನಗೆ ಈಗ ತೋರಿಸಿದ ಮತ್ತೊಂದು ದಾಖಲೆಯಲ್ಲಿ ನನ್ನ ಸಹಿ ಇರುತ್ತದೆ. ಆ ದಾಖಲೆಯು ಪಂಚನಾಮೆಯಾಗಿದ್ದು, ಅದನ್ನು ನಿಪಿ-5 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು.

ನಿಪಿ-4 ಮತ್ತು 5 ರಲ್ಲಿ ಬರೆದ ವಿಚಾರಗಳು ನನಗೆ ಗೊತ್ತಿಲ್ಲ.

ಪೊಲೀಸರು ನನ್ನನ್ನು ವಿಚಾರಣೆ ಮಾಡಿಲ್ಲ. ಅವರಿಗೆ ನಾನು ಮುಂದುವರೆದ ಹೇಳಿಕೆಯನ್ನು ನೀಡಿಲ್ಲ.

**ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಮಾನ್ಯ ಎಪಿಪಿ ರವರು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.**

**ಪಾಟೀ ಸವಾಲು ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ದಿನಾಂಕ.14.07.2018 ರಂದು ಬೆಳಿಗ್ಗೆ 10:40 ಕ್ಕೆ ಆರೋಪಿತರು ಅಕ್ರಮ ಗುಂಪು ಕಟ್ಟಿಕೊಂಡು ಚಾಸಾ-3 ರವರ ಓಣಿಗೆ ಅತಿಕ್ರಮ ಪ್ರವೇಶ ಮಾಡಿ ಪೈಪು ಊತುಹಾಕಲು ಗುಂಡಿಯನ್ನು ತೊಡುತ್ತಿದ್ದಾಗ ಚಾಸಾ-2 ಮತ್ತು 3 ರವರು ಪ್ರಶ್ನಿಸಿದ್ದಕ್ಕೆ ಆರೋಪಿತರು ಕೈಗಳಿಂದ ಹೊಡೆದು ಕೆಳಗೆ ಬೀಳಿಸಿ ಕಾಲಿನಿಂದ ಒದ್ದು ಪ್ರಾಣ ಬೆದರಿಕೆ ಹಾಕಿರುತ್ತಾರೆಂದು ಪೊಲೀಸರಿಗೆ ನಿಪಿ-4 ರಂತೆ ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ.

ದಿನಾಂಕ.15.07.2018 ರಂದು ಬೆಳಿಗ್ಗೆ 9:30 ರಿಂದ 10:00 ಗಂಟೆ ಸಮಯದಲ್ಲಿ ಘಟನಾ ಸ್ಥಳದಲ್ಲಿ ಪೋಲೀಸರು ನನ್ನ ಸಮಕ್ಷಮ ನಿಪಿ-5 ರಂತೆ ಪಂಚನಾಮ ಕ್ರಮ ಜರುಗಿಸಿ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ದಿನಾಂಕ.15.07.2018 ರಂದು ಪೋಲೀಸರಿಗೆ ಮರುಹೇಳಿಕೆ ನೀಡಿದ್ದೇನೆಂದರೆ ಸರಿಯಲ್ಲ. ಸಾಕ್ಷಿಗೆ ತನ್ನ ಮರುಹೇಳಿಕೆಯನ್ನು ಓದಿ ಹೇಳಿದ್ದು, ಸಾಕ್ಷಿಯು ತನ್ನ ಮರುಹೇಳಿಕೆಯನ್ನು ತಿರಸ್ಕರಿಸಿದ್ದರಿಂದ ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿತರ ಪರ ವಕೀಲರಿಂದಃ-**

ಆರೋಪಿ ಪರ ವಕೀಲರು ತಮ್ಮ ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

**ಮರುವಿಚಾರಣೆ :ಇಲ್ಲ**

**(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಪಡೆದುಕೊಂಡಿರುತ್ತೇನೆ ಎಂದು ದೃಡಿಕರೀಸುತ್ತೇನೆ.)**

**ಓ ಹೇ ಕೇ ಸ ಇ**

**ಪ್ರಧಾನ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ ಕನಕಪುರ.**

## ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ, ಕನಕಪುರ

## ಸಿ.ಸಿ ನಂಃ 102/2019

| | | | |
|---|---|---|---|
| **ಚಾಸಾ ಃ** | **2** | **ಪ್ರಾಸಾಃ-** | **3** |

| | |
|---|---|
| ಹೆಸರು | ಮಕ್‌ಬುಲ್ ಅಹಮ್ಮದ್ |
| ತಂದೆಯ ಹೆಸರು | ಲೇಟ್ ಅಬ್ದುಲ್ ಖಾದರ್ |
| ವಯಸ್ಸು | 70 |
| ಉದ್ಯೋಗ | ವಿಶ್ರಾಂತ ಜೀವನ |
| ವಿಳಾಸ | ಕನಕಪುರ |

- - - - - - - - - - - - - - - - - - - - - - - - - - - - - - - -

**ದಿಃ19.03.2024ರಂದು ಸಾಕ್ಷಿಗೆ ಪ್ರಮಾಣ ವಚನ ಬೋದಿಸಲಾಯಿತು.**

**ಮುಖ್ಯವಿಚಾರಣೆ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ಆರೋಪಿತರ ಪರಿಚಯವಿಲ್ಲ. ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ.

ಆರೋಪಿತರ ಮತ್ತು ನಮ್ಮ ನಡುವೆ ಯಾವುದೇ ಗಲಾಟೆಯಾಗಿರುವುದಿಲ್ಲ. ಆರೋಪಿತರು ನಮಗೆ ಗಂಪು ಕಟ್ಟಿಕೊಂಡು ಬಂದು ಅತಿಕ್ರಮ ಪ್ರವೇಶ ಮಾಡಿ, ಯಾವುದೇ ಹಲ್ಲೆ ಮಾಡಿಲ್ಲ ಮತ್ತು ಪ್ರಾಣ ಬೆದರಿಕೆ ಹಾಕಿಲ್ಲ.

ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಜರುಗಿಸಿಲ್ಲ. ನನಗೆ ಈಗ ತೋರಿಸಿದ ಒಂದು ದಾಖಲೆಯಲ್ಲಿ ನನ್ನ ಸಹಿ ಇರುತ್ತದೆ. ಆ ದಾಖಲೆಯು ಪಂಚನಾಮೆಯಾಗಿದ್ದು, ಅದನ್ನು ನಿಪಿ-5 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-5(ಬಿ) ಎಂದು ಗುರುತಿಸಲಾಯಿತು.

ನಿಪಿ-5 ರಲ್ಲಿ ಬರೆದ ವಿಚಾರಗಳು ನನಗೆ ಗೊತ್ತಿಲ್ಲ.

ಪೊಲೀಸರು ನನ್ನನ್ನು ವಿಚಾರಣೆ ಮಾಡಿಲ್ಲ. ಅವರಿಗೆ ನಾನು ಹೇಳಿಕೆಯನ್ನು ನೀಡಿಲ್ಲ.

**ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಮಾನ್ಯ ಎಪಿಪಿ ರವರು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.**

**ಪಾಟೀ ಸವಾಲು ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ದಿನಾಂಕ.15.07.2018 ರಂದು ಬೆಳಿಗ್ಗೆ 9:30 ರಿಂದ 10:00 ಗಂಟೆ ಸಮಯದಲ್ಲಿ ಘಟನಾ ಸ್ಥಳದಲ್ಲಿ ಪೋಲೀಸರು ನನ್ನ ಸಮಕ್ಷಮ ನಿಪಿ-5 ರಂತೆ ಪಂಚನಾಮ ಕ್ರಮ ಜರುಗಿಸಿ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ದಿನಾಂಕ.18.07.2018 ರಂದು ದಿ.14.7.2018 ರ ಘಟನೆಗೆ ಸಂಬಂಧಿಸಿದಂತೆ ಪೋಲೀಸರಿಗೆ ಹೇಳಿಕೆ ನೀಡಿದ್ದೇನೆಂದರೆ ಸರಿಯಲ್ಲ. ಸಾಕ್ಷಿಗೆ ತನ್ನ ಹೇಳಿಕೆಯನ್ನು ಓದಿ ಹೇಳಿದ್ದು, ಸಾಕ್ಷಿಯು ತನ್ನ ಹೇಳಿಕೆಯನ್ನು ತಿರಸ್ಕರಿಸಿದ್ದರಿಂದ ಅದನ್ನು ನಿಪಿ-7 ಎಂದು ಗುರುತಿಸಲಾಯಿತು.

ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿತರ ಪರ ವಕೀಲರಿಂದಃ-**

ಆರೋಪಿ ಪರ ವಕೀಲರು ತಮ್ಮ ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

**ಮರುವಿಚಾರಣೆ ಃಇಲ್ಲ**

**(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಪಡೆದುಕೊಂಡಿರುತ್ತೇನೆ ಎಂದು ದೃಡಿಕರೀಸುತ್ತೇನೆ.)**

**ಓ ಹೇ ಕೇ ಸ ಇ**

**ಪ್ರಧಾನ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ ಕನಕಪುರ.**